# ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ, ಮಾನವಿ.

ಜಿಲ್ಲಾ॥ ರಾಯಚೂರು.

ಸಂಖ್ಯೆ : ಎ4/ಶಾ.ಶೂ.ಪ್ರಾ.ಶಾ/ಅನು/72/2013-14 ದಿನಾಂಕ :31-1-2014.

## ನಮೂನೆ – 2

[ನಿಯಮ 7 ಉಪ ನಿಯಮ 5 (ಬಿ)]

ಶ್ರೀ ಸಂಜೀವರಾಯ ಎಜ್ಯುಕೇಶನ್ ಟ್ರಸ್ಟ್ (ರಿ) ಕೋನಾಪುರ ಪೇಟೆ ಮಾನವಿ , (ತಾಲೂಕ॥ ಮಾನವಿ. ಜಿಲ್ಲಾ॥ ರಾಯಚೂರು) ಇವರ ಗವರ್ನಿಂಗ್ ಕೌನ್ಸಿಲ್‌ನ್ನು ಕರ್ನಾಟಕ ಶಿಕ್ಷಣ ಕಾಯ್ದೆ 1983 (ಕರ್ನಾಟಕ ಆಕ್ಟ್ 1-1995) ಸೆಕ್ಷನ್ 21 ರಂತೆ ಈ ದಿನ ............2014............ ಇಸ್ವಿಯಂದು ಈ ಕೆಳಗೆ ನಮೂದಿಸಿರುವ ಶಿಕ್ಷಣ ಸಂಸ್ಥೆಯನ್ನು ನಡೆಸಲು ನೋಂದಾಯಿಸಲಾಗಿದೆ.

| | | | |
|---|---|---|---|
| 1. | ಕ್ರಮ ಸಂಖ್ಯೆ | : | 143 |
| 2. | ಶಿಕ್ಷಣ ಸಂಸ್ಥೆಯ ವಿವರ | : | ಶ್ರೀ ಸಂಜೀವರಾಯ ಎಜ್ಯುಕೇಶನ್ ಟ್ರಸ್ಟ್ (ರಿ) ಕೋನಾಪುರಪೇಟೆ ಮಾನವಿ. |
| 3. | ಶಾಲೆ ಹೆಸರು | : | ಸರ್ವೋದಯ ಪಬ್ಲಿಕ್ ಪೂರ್ವ ಪ್ರಾಥಮಿಕ ಶಾಲೆ, ಕೋನಾಪುರಪೇಟೆ ಮಾನವಿ . |
| 4. | ಅನುಮತಿ ನೀಡಿದ ತರಗತಿ | : | ಬಾಲಾ ವರ್ಗ 1 ಮತ್ತು 2 |
| 5. | ಅನುಮತಿ ನೀಡಿದ ಮಾಧ್ಯಮ | : | ಕನ್ನಡ |
| 6. | ಶುಲ್ಕ ಪಾವತಿ ಮಾಡಿರುವುದು | : | ರೂ 2000/- |

ಸದರಿ ಶಿಕ್ಷಣ ಸಂಸ್ಥೆಯನ್ನು ಕ್ರಮ ಸಂಖ್ಯೆ :19.. ಪುಟ ಸಂಖ್ಯೆ : ......2...... ವ್ಯಾಲ್ಯೂಂ ಸಂಖ್ಯೆ :...........02...... ರಲ್ಲಿ ಈ ಕಛೇರಿಯಲ್ಲಿನ ಸಂಸ್ಥೆಗಳ ನೊಂದಣಿವಹಿಯಲ್ಲಿ ನೋಂದಾಯಿಸಲಾಗಿದೆ.

SECRETARY
Sri Sanjeevaraya Education Trust (R)
Manvi-584123 Dist · Raichur

PRINCIPAL
Sarvodaya Public School
MANVI-584123 Dt: Raichur

**ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ನೀಡಲಾಗಿದೆ.**

1) ಈ ನೋಂದಣಿಯ ನಿಯಮ 3(5) ಕ್ಕೆ ಒಳಪಟ್ಟಿರುತ್ತದೆ.

2) ಗವರ್ನಿಂಗ್ ಕೌನ್ಸಿಲ್ ಇವರು 4(4) ರಲ್ಲಿ ತಿಳಿಸಿದಂತೆ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.

3) ಶಾಲಾ ನಿವೇಶನ ವಿಸ್ತೀರ್ಣ, ಕಟ್ಟಡ, ಪಾಠ, ಪೀಠೋಪಕರಣಗಳು, ಸಿಬ್ಬಂದಿ ವರ್ಗ, ಆರ್ಥಿಕ ಅನುಕೂಲತೆ ಮುಂತಾದವುಗಳನ್ನು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ.

4) ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರಕಾರದ ಪೂರ್ವಾನುಮತಿಯಿಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.

5) ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.

6) ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯೂ ಅದೇ ಸ್ಥಳದಲ್ಲಿ ಮತ್ತು ಅದೇ ಹೆಸರಿನಲ್ಲಿ ನಡೆಸತಕ್ಕದ್ದು ಮತ್ತು ಯಾವುದೇ ಕಾರಣಕ್ಕೂ ಸರಕಾರದ ಪೂರ್ವಾನುಮತಿ ಇಲ್ಲದೆ ಹಸ್ತಾಂತರಿಸತಕ್ಕದ್ದಲ್ಲ.

7) ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸಿದ ಎಲ್ಲಾ ಸರಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ 1983 (ಕರ್ನಾಟಕ ಆಕ್ಟ ಸಂಖ್ಯೆ : 1/65) ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಅದರಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.

8) ಈ ಪ್ರಾಥಮಿಕ ಶಾಲಾ ನೋಂದಣಿಯಂತೆ ಸರಕಾರಿ ಅಧಿಸೂಚನೆ ಸಂಖ್ಯೆ : ಇಡಿ 175 ಪಿ.ಎಂ.ಸಿ. 65 ದಿನಾಂಕ : 07-09-1995 ಮತ್ತು 29-12-1998 ರ ಪ್ರಕಾರ ಶಾಶ್ವತ ಅನುದಾನ ರಹಿತವಾಗಿರುತ್ತದೆ. ಆಡಳಿತ ಮಂಡಳಿಯು ಸರಕಾರದಿಂದ ಯಾವುದೇ ಅನುದಾನವನ್ನು ಬಯಸುವುದಿಲ್ಲವೆಂದು ರೂಪಾಯಿ 10/- ರ ಛಾಪಾ ಕಾಗದದಲ್ಲಿ ನೋಟರಿಯವರ ಮುಂದೆ ಪ್ರಮಾಣೀಕರಿಸಿದ ಒಪ್ಪಿಗೆ ಪತ್ರವನ್ನು ನೀಡುವುದು.

9) ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳ (ಶಿಸ್ತು ಮತ್ತು ನಿಯಂತ್ರಣ) ನಿಯಮ 1999 ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.

10) ಇಲಾಖೆ ಹಾಗೂ ಸರಕಾರ ನಿಗಧಿಪಡಿಸಿದ ಪಠ್ಯ ಪುಸ್ತಕ ಪರೀಕ್ಷಾ ಕ್ರಮ ಇತ್ಯಾದಿ ತಪ್ಪದೇ ಅಳವಡಿಸತಕ್ಕದ್ದು.

11) ಅನುಮತಿ ಪಡೆದ 2 ತಿಂಗಳ ಒಳಗಾಗಿ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಆಕ್ಟ್ 1 ಆಪ್ 1995) ಪ್ರಕಾರ ಸೆಕ್ಷನ್ 36 ರಿಂದ 39 ರ ರೀತ್ಯಾ ಹಾಗೂ ಇಡಿ 131 ವಿವಿಧ 98 ಬೆಂಗಳೂರು ದಿನಾಂಕ : 4-1-1999 ರಂತೆ ರಿಕಗ್ನಿಷನ್ ಹಾಗೂ ಪ್ರಾವಿಜನಲ್ ರಿಕಗ್ನಿಷನ್ ಹೊಂದಲು ಸರಕಾರಿ ಪ್ರಧಿಕಾರಗಳಿಗೆ ರಿಕಗ್ನಿಷನ್ ಅರ್ಜಿ ಸಲ್ಲಿಸತಕ್ಕದ್ದು.

12) ಭಾಷಾ ನೀತಿಗೆ ಒಳಪಟ್ಟು ನೋಂದಣಿಯಗಿರುವ ಶಾಲೆಗಳಲ್ಲಿ ಭಾಷಾ ನೀತಿಯನ್ನು ಉಲ್ಲಂಘಿಸಿರುವ ಸರಕಾರದ/ಇಲಾಖೆ/ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಗಮನಕ್ಕೆ ಬಂದಲ್ಲಿ ನಿಯಮಗಳನ್ವಯ ಸದರಿ ಶಾಲೆಯ ಅನುಮತಿ ಮತ್ತು ನೋಂದಣಿಯನ್ನು ರದ್ದು ಪಡಿಸಲಾಗುವುದು. ನೋಂದಣಿ ಪ್ರಾಸ್ತಾವನೆಯೊಡನೆ ಸಲ್ಲಿಸಿದ ದಾಖಲತಿಗಳು ಸತ್ಯಕ್ಕೆ ದೂರವಾದದ್ದೆಂದು ಯಾವುದೇ ಸಂದರ್ಭದಲ್ಲಿ ಕಂಡು ಬಂದಲ್ಲಿ ಈ ನೋಂದಣಿಯನ್ನು ರದ್ದು ಪಡಿಸಲಾಗುವುದು

13) ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಆಡಳಿತ ಮಂಡಳಿಯ ಕಾರ್ಯದರ್ಶಿಗಳ ಜಂಟಿ ಖಾತೆಯಲ್ಲಿ ಇರತಕ್ಕದ್ದು.

14) ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ನಿಯಮಾನುಸಾರ ಪಾಲಿಸತಕ್ಕದ್ದು.

15) ತರಬೇತಿ ಹೊಂದಿದ ಹಾಗೂ ಇಲಾಖೆಗಳ ನಿಯಮದ ಪ್ರಕಾರ ವಿದ್ಯಾರ್ಹತೆಯನ್ನು ಹೊಂದಿದ ಶಿಕ್ಷಕರನ್ನು ಮಾತ್ರ ನೇಮಿಸತಕ್ಕದ್ದು.

16) ಪ್ರತಿ ವರ್ಷವು ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.

SECRETARY
Sri Sanjeevaraya Education Trust (R)
Manvi-584123 Dist · Raichur

PRINCIPAL
Sarvodaya Public School
MANVI-584123 Dt: Raichur

17) ಕರ್ನಾಟಕ ಶಿಕ್ಷಣ ಮಸೂದೆ ನಿಯಮಗಳ ಪ್ರಕಾರ ಶಾಲೆಗೆ ಬೇಕಾದ ಪೀಠೋಪಕರಣ, ಪಾಠೋಪಕರಣ, ಗ್ರಂಥಾಲಯ ಪುಸ್ತಕಗಳು, ಆಟದ ಮೈದಾನ, ಶಾಲಾ ಕಟ್ಟಡ ಮುಂತಾದ ಸೌಲಭ್ಯಗಳನ್ನು ಒಂದು ವರ್ಷದಲ್ಲಿ ಒದಗಿಸಿಕೊಳ್ಳತಕ್ಕದ್ದು, ಇಲ್ಲದಿದ್ದಲ್ಲಿ ನೋಂದಣಿಯನ್ನು ರದ್ದುಗೊಳಿಸಲಾಗುವುದು.

18) ಶಾಲಾ ಕೆಲಸದ ವೇಳೆ ಮತ್ತು ದಿನಗಳನ್ನು ಇಲಾಖೆಯ ನಿಯಮದಂತೆ ಪಾಲಿಸತಕ್ಕದ್ದು.

19) ಶಾಲಾ ತೆರೆದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿಯನ್ನು ಶಾಲೆ ನೋಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭವಾದ ಎರಡು ತಿಂಗಳ ಒಳಗಾಗಿ ಈ ಕಛೇರಿಗೆ ತಿಳಿಸಬೇಕು. ಈ ಆದೇಶ ತನ್ನಿಂದ ತಾನೆ ರದ್ದಾಗುವುದು.

20) ಮಾನ್ಯ ನಿರ್ದೇಶಕರು (ಪ್ರಾ.ಶಿ.) ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಅವರು ಜ್ಞಾಪನಾ ಸಂಖ್ಯೆ : ಸಿ7(2) ಪ್ರಾ.ಶಾ.ಸಿ. ಆಂಗ್ಲ ಆ 13/2002-03 ದಿನಾಂಕ : 14-07-2003 ರಂತೆ ಪೂರ್ವ ಪ್ರಾಥಮಿಕ ಶಾಲೆಗೆ ಅನುಮತಿ ನೀಡಿದೆ.

ಕ್ಷೇತ್ರ ಶಿಕ್ಷಣಾಧಿಕಾರಿಗಳು
ಕ್ಷೇತ್ರ ಶಿಕ್ಷಣಾಧಿಕಾರಿಗಳು
ಮಾನವಿ.

ಗೆ,
ಅಧ್ಯಕ್ಷರು /ಕಾರ್ಯದರ್ಶಿಗಳು,
: : ಶ್ರೀ ಸಂಜೀವರಾಯ ಎಜ್ಯುಕೇಶನ್ ಟ್ರಸ್ಟ್ (ರಿ)
ಕೋನಾಪುರಪೇಟೆ ಮಾನವಿ.

<u>ಇದರ ಪ್ರತಿಯನ್ನು :</u>
ಮಾನ್ಯ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ರಾಯಚೂರು ಇವರ ಅವಗಾಹನೆಗಾಗಿ ಸಲ್ಲಿಸಲಾಗಿದೆ.

SECRETARY
Sri Sanjeevaraya Education Trust (R)
Manvi-584123 Dist · Raichur

PRINCIPAL
Sarvodaya Public School
MANVI-584123 Dt: Raichur

ACE Scanner

ಕರ್ನಾಟಕ ಸರ್ಕಾರ
ಸಾರ್ವಜನಿಕ ಶಿಕ್ಷಣ ಇಲಾಖೆ
ಉಪನಿರ್ದೇಶಕರ ಕಚೇರಿ,ಸಾರ್ವಜನಿಕ ಶಿಕ್ಷಣ ಇಲಾಖೆ,RAICHUR(2906)ಲ್ಲೆ

ದಿನಾಂಕ: 30-Jul-2022

[ನಿಯಮ 3 ಉಪನಿಯಮ 5 (ಬಿ)]
ಪ್ರಮಾಣ ಪತ್ರ ಸಂಖ್ಯೆ: 140555/ 2022-23 | 1842

ಆಯುಕ್ತರ ಕಚೇರಿ ಸುತ್ತೋಲೆ ಸಂಖ್ಯೆ ಪ.ಸಂ: ಸಿ7(2)ಪ್ರಾ.ಶಾಲೆ/ಹೊ.ಶಾ.ನೋಂ/10/2021-22 ದಿನಾಂಕ: 19-07-2022 ರಂತೆ ಶ್ರೀ ಸಂಜೀವರಾಯ ಎಜ್ಯುಕೇಶನ್ ಟ್ರಸ್ಟ್ (ರಿ) ಮಾನ್ವಿ ಇವರ ಗೌವರ್ನಿಂಗ್ ಕೌನ್ಸಿಲಿಂಗ್ ಈ ಶಿಕ್ಷಣ ಸಂಸ್ಥೆಯ ಹೊಸ ಪ್ರಾಥಮಿಕ /ಪ್ರೌಢ ಶಾಲೆಯನ್ನು ಪ್ರಾರಂಭಿಸಲು ಸಲ್ಲಿಕೆಯಾದ ಪ್ರಸ್ತಾವನೆಯನ್ನು ಪರಿಶೀಲಿಸಿ ಕರ್ನಾಟಕ ಶಿಕ್ಷಣ ಕಾಯ್ದೆ 1983ರ [ಕರ್ನಾಟಕ ಆಕ್ಟ್ 1995] ಸೆಕ್ಷನ್ 31 ಮತ್ತು ಸರ್ಕಾರದ ಅಧಿಸೂಚನೆ ಸಂಖ್ಯೆ ಇಪಿ 75 ಪಿಜಿಸಿ 2022 ದಿ: 25-04-2022 ರಂತೆ ಈ ಕೆಳಕಂಡ ಪೂರ್ವ ಪ್ರಾಥಮಿಕ ದಿಂದ ಹತ್ತನೇ ತರಗತಿ / ಒಂದರಿಂದ ಹತ್ತನೆ ತರಗತಿ (1-10) ಒಂದರಿಂದ ಐದನೇ ತರಗತಿ (1- 5) ಆರರಿಂದ ಎಂಟು (6-8) ಮತ್ತು ಒಂಬತ್ತು - ಹತ್ತನೆ ತರಗತಿ (9-10) ಪ್ರಾರಂಭಿಸಲು ಮಂಜೂರಾತಿ ನೀಡಿ ನೋಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ.

1.ಅರ್ಜಿ ಸಂಖ್ಯೆ : 221449

2.ಕ್ರಮ ಸಂಖ್ಯೆ : 140555

3.ಶಾಲೆಯ ಹೆಸರು ಮತ್ತು ವಿಳಾಸ : SARVODAYA PUBLIC HIGH SCHOOL MANVI ( MANVI )

4. ಅನುಮತಿ ನೀಡಿದ ತರಗತಿ : Secondary (9 ರಿಂದ 10)

5. ಶೈಕ್ಷಣಿಕ ವರ್ಷ : 2022-23

6 ಅನುಮತಿ ನೀಡಿದ ಮಾಧ್ಯಮ : English

7.ಈ ಕಚೇರಿಯಲ್ಲಿನ ನೋಂದಣಿ ವಹಿಯಲ್ಲಿ ನೋಂದಾಯಿಸಿದ ಕ್ರಮ ಸಂಖ್ಯೆ /ಪುಟ ಸಂಖ್ಯೆ / ವಾಲ್ಯೂಂ ಸಂಖ್ಯೆ : 34

ಷರತ್ತುಗಳು:

1. ಈ ನೋಂದಣಿಯು ನಿಯಮ 3(5) (4) ಕ್ಕೆ ಒಳಪಟ್ಟಿರುತ್ತದೆ. :
2. ಗೌರ್ನಿಂಗ್ ಕೌನ್ಸಿಲ್ ಇವರು ನಿಯಮ4(4) ರಲ್ಲಿ.ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು :
3. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಆಡಳಿತ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿಯೇ ನಡೆಸತಕ್ಕದ್ದು.
4. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗೆ ಹೊರಡಿಸುವ ಎಲ್ಲಾ ಸರ್ಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ 1983 ( ಕರ್ನಾಟಕ ಆಕ್ಟ್ ಸಂಖ್ಯೆ :1:96) ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಅದರಡಿಯಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು
5. ಶಾಲಾ ನಿವೇಶನ , ವಿಸ್ತೀರ್ಣ, ಕಟ್ಟಡ ಪೀಠೋಪಕರಣಗಳು, ಸಿಬ್ಬಂದಿ ವರ್ಗ , ಆರ್ಥಿಕ ಅನುಕೂಲತೆಗಳು ಮುಂತಾದವುಗಳನ್ನು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂಧರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ:
6. ಈ ಪ್ರೌಢಶಾಲಾ ನೋಂದಣಿಯಂತೆ ಸರ್ಕಾರಿ ಅಧಿಸೂಚನೆ ಸಂ:ಇಡಿ 175 ಪಿ.ಎಂ.ಸಿ 95 ದಿನಾಂಕ:07-09-1998 ಮತ್ತು ದಿನಾಂಕ:29-12-1998 ರ ಪ್ರಕಾರ ಶಾಶ್ವತ ಅನುದಾನರಹಿತವಾಗಿರುತ್ತದೆ. ಆಡಳಿತ ಮಂಡಳಿಯು ಸರ್ಕಾರದಿಂದ ಯಾವುದೇ ಅನುದಾನವನ್ನು ಬಯಸುವುದಿಲ್ಲವೆಂದು ರೂ 50/- ಛಾಪಾ ಕಾಗದಲ್ಲಿ ನೋಟರಿಯವರ ಮುಂದೆ ಪ್ರಮಾಣೀಕರಿಸಿ ಒಪ್ಪಿಗೆ ಪತ್ರವನ್ನು ನೀಡುವುದು :
7. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳು (ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ, ಸೇವಾ ಷರತ್ತು ಮತ್ತು ನಿಬಂಧನೆಗಳು) ನಿಯಮ1999 ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.
8. ಇಲಾಖೆ ಹಾಗೂ ಸರ್ಕಾರ ನಿಗದಿಪಡಿಸಿದ ಪಠ್ಯ ಪುಸ್ತಕ , ಪರೀಕ್ಷಾ ಕ್ರಮಗಳನ್ನು ಮಾತ್ರ ತಪ್ಪದೇ ಅಳವಡಿಸಿಕೊಳ್ಳತಕ್ಕದ್ದು.
9. ತರಬೇತಿ ಹೊಂದಿದ ಹಾಗೂ ಇಲಾಖೆ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಮಾತ್ರ ನೇಮಿಸಿಕೊಳ್ಳತಕ್ಕದ್ದು.
10. ಪ್ರತಿ ವರ್ಷವೂ ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.
11. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಜಿಲ್ಲಾ ಉಪನಿರ್ದೇಶಕರು ಹಾಗೂ ಆಡಳತ ಮಂಡಳಿಯ ಜಂಟಿ ಖಾತೆಯಲ್ಲಿ ಇರಿಸತಕ್ಕದ್ದು.
12. ಶಾಲೆ ತೆರೆದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿ ಮಾಹಿತಿಯನ್ನು ಶಾಲೆ ನೋಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭವಾದ ಮೂರು ತಿಂಗಳ ಒಳಗಾಗಿ ಈ ಕಚೇರಿಗೆ ತಿಳಿಸಬೇಕು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದರೂ ಆದೇಶ ತಂತಾನೆ ರದ್ದಾಗುತ್ತದೆ.
13. ಶಾಲೆಯ ಕಟ್ಟಡ ಸುರಕ್ಷತೆ ಬಗ್ಗೆ ಬೆಂಕಿ, ಬಿರುಗಾಳಿ, ವಿದ್ಯು ತ್ ಅಪಘಾತ ಅವಘಡಗಳಿಂದ ಸುರಕ್ಷಿತವಾಗಿರುವ ಬಗ್ಗೆ ಪರಿಶೀಲಿಸಿ ಖಚಿತಪಡಿಸಿಕೊಳ್ಳುವುದು. ಶಾಲಾ ಆವರಣದಲ್ಲಿ 100 ಗಜಗಳ ಅಂತರದಲ್ಲಿ ತಂಬಾಕು ಉತ್ಪನ್ನಗಳ ಮಾರಾಟವನ್ನು ನಿಷೇಧಿಸಿದ ಎಂದು ಶಾಲಾ ಮುಂಬಾಗದಲ್ಲಿ ಪ್ರಕಟಣೆ ನೀಡುವುದು.
14. ಶಾಲಾ ಆಡಳಿತ ಮಂಡಳಿ ಯಾವುದೇ ತಪ್ಪು ಮಾಹಿತಿಗಳನ್ನು ನೀಡಿದ್ದಲ್ಲಿ ನೋಂದಣಿಯನ್ನು ರದ್ದುಪಡಿಸುವ ಅಧಿಕಾರಿ ಇಲಾಖೆ ಕಾಯ್ದಿರಿಸಿಕೊಂಡಿದೆ.
15. ಸರ್ಕಾರದ ಅಧಿಸೂಚನೆ ಸಂಖ್ಯೆ ಇಡಿ 369 ಪಿ.ಜಿ.ಸಿ 2014 ದಿನಾಂಕ:11-11-2014 ರಂತೆ ಮತ್ತು ಈ ಕಚೇರಿ ಸುತ್ತೋಲೆ ದಿನಾಂಕ:14-11-2014 ರಂತೆ ಷರತ್ತುಗಳನ್ನು ಪಾಲಿಸುವುದು.
16. ಸರ್ಕಾರದ ಅಧಿಸೂಚನೆ ಸಂಖ್ಯೆ ಇಡಿ 709 ಪಿ.ಜಿ.ಸಿ.2017 ದಿನಾಂಕ:07-03-2018 ರಂತೆ ಮತ್ತು ಈ ಕಚೇರಿ ಸುತ್ತೋಲೆ ದಿನಾಂಕ: 25-11-2019 ರಂತೆ ಷರತ್ತುಗಳನ್ನು ಪಾಲಿಸಿರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.
17. ಮಹಾನಿರ್ದೇಶಕರು, ಕರ್ನಾಟಕ ರಾಜ್ಯ ಅಗ್ನಿ ಶಾಮಕ ಮತ್ತು ತುರ್ತು ಸೇವೆಗಳು, ಬೆಂಗಳೂರು ಇವರ ಸುತ್ತೋಲೆ ಸಂಖ್ಯೆ ಜಿಬಿಸಿ (1) 502/2004 ದಿನಾಂಕ:08-07-2020 ರಂತೆ ಅಗ್ನಿ ಸುರಕ್ಷತೆಗೆ ಸಂಬಂಧಿಸಿದಂತೆ . ಮಹಾನಿರ್ದೇಶಕರು, ಕರ್ನಾಟಕ ರಾಜ್ಯ ಅಗ್ನಿ ಶಾಮಕ ಮತ್ತು ತುರ್ತು ಸೇವೆಗಳು, ಬೆಂಗಳೂರು ಇವರ ಸುತ್ತೋಲೆ ಸಂಖ್ಯೆ ಜಿಬಿಸಿ (1) 502/2004 ದಿನಾಂಕ: 08-07-2020 ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರವನ್ನು ಕಾಲಕಾಲಕ್ಕೆ ನವೀಕರಿಸಿ ಸಂಬಂಧಿಸಿದ ಉಪನಿರ್ದೇಶಕರಿಗೆ ಸಲ್ಲಿಸುವುದು.
18. ಕಟ್ಟಡ ಸುರಕ್ಷತೆಗೆ ಸಂಬಂಧಿಸಿದಂತೆ ಪ್ರಮಾಣ ಪತ್ರವನ್ನು ಕಾಲ-ಕಾಲಕ್ಕೆ ಸಕ್ಷಮ ಪ್ರಾಧಿಕಾರದಿಂದ ನವೀಕರಿಸಿ ಸಂಬಂಧಿಸಿದ ಉಪನಿರ್ದೇಶಕರಿಗೆ ಸಲ್ಲಿಸುವುದು.
19. ಆನ್ ಲೈನ್ ನಲ್ಲಿ ಅಪ್ ಲೋಡ್ ಮಾಡಿದ ದಾಖಲೆಗಳು ನೈಜತೆಯಿಂದ ಕೂಡಿರದಿದ್ದಲ್ಲಿ ಈ ಆದೇಶವು ತಂತಾನೆ ರದ್ದಾಗುತ್ತದೆ.
20. ಶಾಲೆಯಲ್ಲಿ ಕಡ್ಡಾಯವಾಗಿ ಸೇವಾ ಭದ್ರತೆ ನಿಯಮಗಳನ್ನು ಪಾಲಿಸತಕ್ಕದ್ದು.
21. ಪ್ರಥಮ ಮಾನ್ಯತೆ ನೀಡುವ ಸಂದರ್ಭದಲ್ಲಿ ತಂತ್ರಾಂಶದಲ್ಲಿ ಅಪ್ಲೋಡ್ ಮಾಡಲಾದ ಮೂಲ ದಾಖಲೆಗಳಾದ ಪರಿವರ್ತನ ಭೂ ದಾಖಲೆ, ಕಟ್ಟಡ ಸುರಕ್ಷತಾ ಪ್ರಮಾಣ ಹಾಗೂ ಅಗ್ನಿ ಸುರಕ್ಷತಾ ಪ್ರಮಾಣ ಪತ್ರಗಳ ನೈಜತೆ ಖಚಿತಪಡಿಸಿಕೊಂಡ ನಂತರವೇ ಪ್ರಥಮ ಮಾನ್ಯತೆ ನೀಡತಕ್ಕದ್ದು.
22. ಪ್ರಥಮ ಮಾನ್ಯತೆಗಾಗಿ ಈ ಕಚೇರಿಗೆ ಪ್ರಸ್ತಾವನೆ ಸಲ್ಲಿಸುವುದು. ಶಿಕ್ಷಣ ಕಾಯ್ದೆ ಮತ್ತು ಸರ್ಕಾರದ ಆದೇಶ ದಿನಾಂಕ: 30-09-2007 ರ ಅನುಬಂಧ -03 ರ ಚೆಕ್ ಲಿಸ್ಟ್ ಮಾಹಿತಿ ಪಡೆದು ಈ ಆಧಾರದ ಮೇಲೆ ಶಾಲೆ ಪ್ರಾರಂಭಿಸಿದ ಮೂರು ತಿಂಗಳೊಳಗೆ ಕಡ್ಡಾಯವಾಗಿ ಪ್ರಥಮ ಮಾನ್ಯತೆ ಪಡೆಯುವುದು. ನಿಗದಿತ ಅವಧಿಯೊಳಗೆ ಮಾನ್ಯತೆ ಪಡೆಯದಿದ್ದಲ್ಲಿ ನೋಂದಣಿ ತಂತಾನೆ ರದ್ದಾಗುತ್ತದೆ. ನೋಂದಣಿ ಆದೇಶದಲ್ಲಿರುವ ಎಲ್ಲಾ ಷರತ್ತುಗಳನ್ನು ಪೂರೈಸಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳತಕ್ಕದ್ದು.

(ಮಾನ್ಯ ಆಯುಕ್ತರ ಆದೇಶದ ಮೇರೆಗೆ)

ಉಪನಿರ್ದೇಶಕರು (ಆಡಳಿತ) ಮತ್ತು
ನೋಂದಣಾಧಿಕಾರಿಗಳು
ಸಾರ್ವಜನಿಕ ಶಿಕ್ಷಣ ಇಲಾಖೆ,
RAICHUR(2906) ಜಿಲ್ಲೆ

ಇವರಿಗೆ,

1. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ MANVI(290606) ತಾಲ್ಲೂಕು,RAICHUR(2906)ಜಿ
2. ಕಾರ್ಯದರ್ಶಿಗಳು ANILKUMAR H
3. ಕಚೇರಿ ಪ್ರತಿ

SECRETARY
Sri Sanjeevaraya Education Trust (R)
Manvi-584123 Dist · Raichur

PRINCIPAL
Sarvodaya Public School
MANVI-584123 Dt: Raichur



PDF Scanner ACE Scanner

ಕರ್ನಾಟಕ ಸರ್ಕಾರ

**ಅಪರ ಆಯುಕ್ತರ ಕಾರ್ಯಾಲಯ, ಸಾರ್ವಜನಿಕ ಶಿಕ್ಷಣ ಇಲಾಖೆ ಐವಾನ್-ಇ-ಶಾಹಿ ಬಡಾವಣೆ, ಕಲಬುರಗಿ-585102**

ಸಂಖ್ಯೆ :ಶಿ3(3)/ಖಾಪ್ರಾಶಾ/ಹೊಶಾಪ್ರಾ/98/2015-16 1295 ದಿನಾಂಕ: 03-08-2015

**ನಮೂನೆ-4**

**ನಿಯಮ-3 ಉಪನಿಯಮ 7**

**ಪರಿವರ್ತಿತ ನೋಂದಣಿ ಪ್ರಮಾಣ ಪತ್ರ ಸಂಖ್ಯೆ: 105**

ಶ್ರೀ ಸಂಜೀವರಾಯ ಎಜುಕೇಷನ್ ಟ್ರಸ್ಟ್ ಕೋನಾಪೂರ ಪೇಟೆ ಮಾನವಿ ಇವರ ಗವರ್ನಿಂಗ್ ಕೌನ್ಸಿಲ್ ಸಲ್ಲಿಸಿರುವ ಪ್ರಸ್ತಾವನೆಯನ್ನು ಕರ್ನಾಟಕ ಶಿಕ್ಷಣ ಕಾಯ್ದೆ 1983 (ಕರ್ನಾಟಕ ಆಕ್ಟ್ 1-1995 ಸೆಕ್ಷನ್ 31 ರಂತೆ ಮತ್ತು karnataka Education Institution (Classification and Registration) Rules 1997 ರ ನಿಯಮ 3ರ ಉಪನಿಯಮ 7 ಈ ಶಿಕ್ಷಣ ಸಂಸ್ಥೆಯ ಅಡಿಯಲ್ಲಿಯ ಕೆಳಗಿನ ತರಗತಿಗಳನ್ನು ನಡೆಸಲು ನೋಂದಾಯಿಸಲಾಗಿದೆ.

| ಕ್ರ.ಸಂ. | ಶಿಕ್ಷಣ ಸಂಸ್ಥೆಯ ವಿವರ | ಅನುಮತಿ ನೀಡಿದ ಪ್ರಾಥಮಿಕ ಶಾಲೆಯ ಹೆಸರು | ಅನುಮತಿ ನೀಡಿದ ತರಗತಿಗಳು | ಪ್ರಾರಂಭಿಸಬೇಕಾದ ತರಗತಿಗಳು | ಈಗಾಗಲೇ ನಡೆಯುತ್ತಿರುವ ಮಾಧ್ಯಮ | ಶುಲ್ಕ ಪಾವತಿ ಮಾಡಿರುವುದು |
|---|---|---|---|---|---|---|
| 1 | ಶ್ರೀ ಸಂಜೀವರಾಯ ಎಜುಕೇಷನ್ ಟ್ರಸ್ಟ್ ಕೋನಾಪೂರ ಪೇಟೆ ಮಾನವಿ | ಸರ್ವೋದಯ ಕಿರಿಯ ಪ್ರಾಥಮಿಕ ಶಾಲೆ, ಕೋನಾಪುರ ಪೇಟೆ, ಮಾನವಿ | 1 ರಿಂದ 5ನೇ ತರಗತಿ | 1 ರಿಂದ 5 | ಕನ್ನಡ | ರೂ. 5,000/- |

ಈ ಮೇಲಿನ ಗವರ್ನಿಂಗ್ ಕೌನ್ಸಿಲ್‌ರವರು ಕರ್ನಾಟಕ ಶಿಕ್ಷಣ ಕಾಯ್ದೆ 1983 ರ ನಿಯಮ 31 ರ ಉಪನಿಯಮ 5 ರಲ್ಲಿ ಶಾಲೆಯನ್ನು ಪರಿವರ್ತಿಸಲು ಸಂಸ್ಥೆಯವರು ಮೇಲೆ ನಮೂದಿಸಿದಂತೆ ನಿಯಮ 31 ರ ಉಪನಿಯಮ 1 ರಂತೆ ಈ ಮೊದಲು ನೋಂದಣಿ ಮಾಡಿದ ಶಾಲೆಯ ವಿವರಗಳನ್ನು ದಾಖಲಿಸಿರುತ್ತಾರೆ ಮತ್ತು ಪ್ರಸ್ತುತ ಈಗಾಗಲೇ ಶಾಲೆ ನೋಂದಣಿ ಮಾಡಿದ ಮೂಲ ನೋಂದಣಿ ಪ್ರಮಾಣ ಪತ್ರವನ್ನು ಉಪನಿರ್ದೇಶಕರು. ರಾಯಚೂರು ಇವರ ನೋಂದಣಿ ಸಂಖ್ಯೆ: 21/2012-13 ದಿನಾಂಕ: 29-05-2012 ರನ್ವಯ ಜಾರಿಗೊಳಿಸಿದ ಪ್ರಮಾಣ ಪತ್ರವನ್ನು ಈ ಮೂಲಕ ಹಿಂಪಡೆದು ರದ್ದುಪಡಿಸಲಾಗಿದೆ ಹಾಗೂ ಈ ಮೊದಲು ಜಾರಿ ಮಾಡಿದ ನೋಂದಣಿ ಪ್ರಾಧಿಕಾರಿಗಳು ತಮ್ಮ ರಜಿಸ್ಟರಿನಲ್ಲಿ ಅವಶ್ಯ ಸೂಕ್ತ ಬದಲಾವಣೆ ಮಾಡತಕ್ಕದ್ದು.

ಪರಿವರ್ತಿತ ನೋಂದಣಿ ಪ್ರಮಾಣ ಪತ್ರವನ್ನು ಶ್ರೀ ಸಂಜೀವರಾಯ ಎಜುಕೇಷನ್ ಟ್ರಸ್ಟ್ ಕೋನಾಪೂರ ಪೇಟೆ ಮಾನವಿ ಇವರಿಗೆ ಈ ಕೆಳಗಿನಂತೆ ತರಗತಿ ನಡೆಸಲು ಅನುಮತಿ ನೀಡಿದೆ.

| ಕ್ರ.ಸಂ. | ಶಿಕ್ಷಣ ಸಂಸ್ಥೆಯ ವಿವರ | ಶುಲ್ಕ ಪಾವತಿಸಿದ ವಿವರ | ಅನುಮತಿ ನೀಡಿದ ತರಗತಿಗಳು | ಶೈಕ್ಷಣಿಕ ವರ್ಷ | ಮಾಧ್ಯಮ |
|---|---|---|---|---|---|
| 1 | ಶ್ರೀ ಸಂಜೀವರಾಯ ಎಜುಕೇಷನ್ ಟ್ರಸ್ಟ್ ಕೋನಾಪೂರ ಪೇಟೆ ಮಾನವಿ | - | **1 ರಿಂದ 5** | **2015-16** | ಆಂಗ್ಲ |

ಸರ್ಕಾರದ ಪತ್ರ ಸಂಖ್ಯೆ: ಇಡಿ 155 ಪಿಜಿಸಿ 2015 ದಿನಾಂಕ: 30-03-2015 ರನ್ವಯ 1 ರಿಂದ 5ನೇ ತರಗತಿಯವರೆಗೆ ಆಂಗ್ಲ ಮಾಧ್ಯಮ ಪ್ರಾಥಮಿಕ ಶಾಲೆಗಳನ್ನು ಪ್ರಾರಂಭಿಸಲು ಅನುಮತಿ ನೀಡುವ ಕುರಿತು, 2015-16ನೇ ಸಾಲಿಗೆ ಅನ್ವಯವಾಗುವಂತೆ ನೋಂದಣಿ ಪ್ರಾಧಿಕಾರಿಯನ್ನಾಗಿ ಅಧಿಕಾರ ಪ್ರತ್ಯಾಯೋಜಿಸಿದ ಹಿನ್ನೆಲೆಯಲ್ಲಿ ಸದರಿ ಶಿಕ್ಷಣ ಸಂಸ್ಥೆಯನ್ನು ಕ್ರಮ ಸಂಖ್ಯೆ: 105 ಪುಟ ಸಂಖ್ಯೆ: 21 ವ್ಯಾಲ್ಯೂಂ ಸಂಖ್ಯೆ: 01 ರಲ್ಲಿ ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೋಂದಾಯಿಸಲಾಗಿದೆ. ಈ ನೋಂದಣಿ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ನೀಡಲಾಗಿದೆ. ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ ಮೇಲ್ಕಂಡ (ನೋಂದಣಿ) ಅನುಮತಿಯನ್ನು ರದ್ದುಪಡಿಸುವ ಅಧಿಕಾರವನ್ನು ಇಲಾಖೆಯು ಕಾಯ್ದಿರಿಸಿಕೊಂಡಿದೆ.

ಷರತ್ತುಗಳು:-

1. ನೋಂದಣಿಯು ನಿಯಮ 3(5) (4) ಕ್ಕೆ ಒಳಪಟ್ಟಿರುತ್ತದೆ ಹಾಗೂ ಗವರ್ನಿಂಗ್ ಕೌನ್ಸಿಲ್ ಇವರು ನಿಯಮ 4(4)ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.
2. ಶಾಲಾ ನಿವೇಶನದ ವಿಸ್ತೀರ್ಣ, ಕಟ್ಟಡ, ಪಾಠೋಪಕರಣಗಳು, ಪೀಠೋಪಕರಣಗಳು, ಸಿಬ್ಬಂದಿ ವರ್ಗ, ಆರ್ಥಿಕ ಅನುಕೂಲತೆಗಳು ಮುಂತಾದವುಗಳು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ.
3. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
4. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.

SECRETARY
Sri Sanjeevaraya Education Trust (R)
Manvi-584123 Dist · Raichur

PRINCIPAL
Sarvodaya Public School
MANVI-584123 Dt: Raichur

PDF Scanner ACE Scanner

5. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿಯೇ ನಡೆಸತಕ್ಕದ್ದು ಮತ್ತು ಯಾವುದೇ ಕಾರಣಕ್ಕೂ ಸಕ್ಷಮ ಪ್ರಾಧಿಕಾರವಾದ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ಕಲಬುರಗಿ ಇವರ ಪೂರ್ವಾನುಮತಿ ಇಲ್ಲದೆ ಹಸ್ತಾಂತರಿಸತಕ್ಕದ್ದಲ್ಲ.
6. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸುವ ಎಲ್ಲಾ ಸರ್ಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ 1983 (ಆಕ್ಟ 1 ಆಫ್ 1995) ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಇದರಡಿಯಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.
7. ಈ ಪ್ರಾಥಮಿಕ ಶಾಲಾ ನೋಂದಾವಣೆಯು ಸರ್ಕಾರಿ ಅಧಿಸೂಚನೆ ಸಂಖ್ಯೆ ಇಡಿ 175 ಪಿಎಂಸಿ 95 ದಿನಾಂಕ: 07.09.1998 ಮತ್ತು 29.12.1998ರ ಪ್ರಕಾರ ಶಾಶ್ವತ ಅನುದಾನ ರಹಿತವಾಗಿರುತ್ತದೆ. (permanently without Aid) ಆಡಳಿತ ಮಂಡಳಿಯು ಸರಕಾರದಿಂದ ಯಾವುದೇ ಅನುದಾನವನ್ನು ಬಯಸುವುದಿಲ್ಲವೆಂದೂ ರೂ 20/- ರ ಛಾಪಾ ಕಾಗದದಲ್ಲಿ ನೋಟರಿಯವರ ಮುಂದೆ ಪ್ರಮಾಣೀಕರಿಸಿದ ಒಪ್ಪಿಗೆ ಪತ್ರವನ್ನು ನೀಡುವುದು.
8. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳ (ಶಿಸ್ತು ಮತ್ತು ನಿಯಂತ್ರಣ) ನಿಯಮ 1999 ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು ಹಾಗೂ ಅವುಗಳಿಗೆ ಬದ್ಧರಾಗಿರತಕ್ಕದ್ದು.
9. ಇಲಾಖೆ ಹಾಗೂ ಸರ್ಕಾರ ನಿಗದಿಪಡಿಸಿದ ಪಠ್ಯಪುಸ್ತಕ, ಪರೀಕ್ಷಾ ಕ್ರಮ, ಇತ್ಯಾದಿ ತಪ್ಪದೇ ಅಳವಡಿಸತಕ್ಕದ್ದು.
10. ಪರಿವರ್ತನೆಗೆ ಅನುಮತಿ ಪಡೆದ 2 ತಿಂಗಳೊಳಗೆ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಆಕ್ಟ್ 1 ಆಫ್ 1995) ರ ಪ್ರಕಾರ ಸೆಕ್ಷನ್ 36 ರಿಂದ 39 ರೀತ್ಯಾ ಹಾಗೂ ಇಡಿ 131 ವಿವಿಧ 98 ಬೆಂಗಳೂರು ದಿನಾಂಕ: 04.11.99 ರಂತೆ ಮಾನ್ಯತೆ ಹಾಗೂ ಸಕ್ಷಮ ಪ್ರಾಧಿಕಾರಿಗಳಿಗೆ ಮಾನ್ಯತೆಗಾಗಿ ಅರ್ಜಿ ಸಲ್ಲಿಸತಕ್ಕದ್ದು.
11. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಜಿಲ್ಲೆಯ ಉಪನಿರ್ದೇಶಕರು ಹಾಗೂ ಆಡಳಿತ ಮಂಡಳಿಯ ಜಂಟಿ ಖಾತೆಯಲ್ಲಿ ಇರಿಸತಕ್ಕದ್ದು.
12. ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ನಿಯಮಾನುಸಾರ ಪಾಲಿಸತಕ್ಕದ್ದು.
13. ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಮಾತ್ರ ನೇಮಿಸತಕ್ಕದ್ದು.
14. ಪ್ರತಿ ವರ್ಷವೂ ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.
15. ಕರ್ನಾಟಕ ಶಿಕ್ಷಣ ಮಸೂದೆ ಅನುಚ್ಛೇದ 8 ರ ಅಡಿಯಲ್ಲಿ ಉಪಬಂಧ 36-39 ರಂತೆ ನೋಂದಾಯಿಸಿದ ಎಲ್ಲಾ ಶಾಲೆಗಳು ಮಾನ್ಯತೆ ಹಾಗೂ ತಾತ್ಕಾಲಿಕ ಮಾನ್ಯತೆ ವ್ಯಾಪ್ತಿಗೆ ಬರುವುದು.
16. ಶಾಲಾ ಕೆಲಸದ ವೇಳೆ ಮತ್ತು ದಿನಗಳನ್ನು ಇಲಾಖೆಯ ನಿಯಮಗಳಂತೆ ಪಾಲಿಸತಕ್ಕದ್ದು.
17. ಹೊಸದಾಗಿ ಆಂಗ್ಲ ಮಾಧ್ಯಮಕ್ಕೆ ಪರಿವರ್ತನೆಯಾದ ಎರಡು ತಿಂಗಳ ಒಳಗಾಗಿ ಶಾಲೆಗೆ ಪ್ರಥಮ ಮಾನ್ಯತೆಯನ್ನು ಕಡ್ಡಾಯವಾಗಿ ಪಡೆಯತಕ್ಕದ್ದು. ಒಂದು ವೇಳೆ ಪ್ರಥಮ ಮಾನ್ಯತೆ ಪಡೆಯದೇ ಶಾಲೆ ನಡೆಸಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತನ್ನಿಂತಾನೇ ರದ್ದಾಗುವುದು.
18. ಶಾಲೆಯಲ್ಲಿ ನೇಮಕಗೊಂಡ ಸಿಬ್ಬಂದಿಯವರ ಸೇವಾ ಪುಸ್ತಕ ತೆರೆದು ಅದರಲ್ಲಿ ಅವರ ಸೇವಾ ವಿವರಗಳನ್ನು ನಿಯಮಾನುಸಾರ ಕಡ್ಡಾಯವಾಗಿ ದಾಖಲಿಸಿ ನಿರ್ವಹಿಸುವುದು.
19. ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆಯ ಮಂಜೂರಾತಿಯಿಂದ ಇತರೆ ಮಾಧ್ಯಮದ ತರಗತಿಗಳಿಗೆ ಯಾವುದೇ ರೀತಿ ಧಕ್ಕೆಬಾರದಂತೆ ನೋಡಿಕೊಳ್ಳುವುದು.
20. ಸಲ್ಲಿಸಿರುವ ಪ್ರಸ್ತಾವನೆಯಲ್ಲಿ ಯಾವುದೇ ದಾಖಲೆಗಳು ಸುಳ್ಳು ದಾಖಲೆಗಳೆಂದು ಕಂಡುಬಂದಲ್ಲಿ ಯಾವ ಮುನ್ಸೂಚನೆಯನ್ನು ನೀಡದೇ ನೋಂದಣಿಯನ್ನು ರದ್ದುಪಡಿಸಲಾಗುವುದು.
21. ಈ ಶಾಲಾ ಶಿಕ್ಷಕರನ್ನು ಗಣತಿ ಕಾರ್ಯಕ್ಕೆ ನಿಯೋಜಿಸುವುದು.
22. ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಪ್ರತ್ಯೇಕ ಶೌಚಾಲಯ ಒದಗಿಸುವುದು ಹಾಗೂ ಕುಡಿಯುವ ನೀರು ಸೌಲಭ್ಯ ಒದಗಿಸುವುದು.
23. ಸೇವಾ ಭದ್ರತೆಯಲ್ಲಿ ವಿಧಿಸಿದ ಎಲ್ಲಾ ಷರತ್ತುಗಳನ್ನು ಪೂರೈಸಿದ್ದಲ್ಲಿ ಮಾತ್ರ ಸದರಿ ಶಾಲೆಗೆ ಪ್ರಥಮ ಮಾನ್ಯತೆ ನವೀಕರಣ ಮಾಡತಕ್ಕದ್ದು.

(ರಾಧಾಕೃಷ್ಣರಾವ್ ಮದನ್‌ಕರ್)
ಅಪರ ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ

ಪ್ರತಿಗಳನ್ನು:-

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ), ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ ಬೆಂಗಳೂರುರವರಿಗೆ ಮಾಹಿತಿಗಾಗಿ.
2. ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ರಾಯಚೂರು ರವರಿಗೆ ಮಾಹಿತಿಗಾಗಿ.
3. ಉಪ ನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ರಾಯಚೂರು.
4. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಮಾನವಿ .
5. ಅಧ್ಯಕ್ಷರು / ಕಾರ್ಯದರ್ಶಿಗಳು, ಶ್ರೀ ಸಂಜೀವರಾಯ ಎಜುಕೇಷನ್ ಟ್ರಸ್ಟ್ ಕೋನಾಪೂರ ಪೇಟೆ ಮಾನವಿ.

SECRETARY
Sri Sanjeevaraya Education Trust (R)
Manvi-584123 Dist · Raichur

PRINCIPAL
Sarvodaya Public School
MANVI-584123 Dt: Raichur

ACE Scanner

**ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಛೇರಿ ರಾಯಚೂರು-584 101.**

ಸಂಖ್ಯೆ: ಲೆವಿ5/ಖಾಪ್ರಾಶಾಲೆ/ಹೊಸ ಪ್ರಾರಂ/69/2017-18 ದಿನಾಂಕ: 13-07-2017

**ನಮೂನೆ-2**

**ನಿಯಮ 3 ಉಪನಿಯಮ 5(ಬಿ)**

**ಪ್ರಮಾಣ ಪತ್ರ ಸಂಖ್ಯೆ: 32**

ಶ್ರೀ ಸಂಜೀವರಾಯ ಎಜ್ಯುಕೇಷನ್ ಟ್ರಸ್ಟ (ರಿ) ಮಾನವಿ ಕೌನ್ಸಿಲನ್ನು ಕರ್ನಾಟಕ ಶಿಕ್ಷಣ ಕಾಯ್ದೆ 1983 (ಕರ್ನಾಟಕ 1995)ಸೆಕ್ಷೆನ್ 31 ರಂತೆ ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆ-2009ರಂತೆ ಈ ದಿನ 13-07-2017 ರಂದು ಈ ಕೆಳಗೆ ನಮೂದಿಸಿರುವ ಶಿಕ್ಷಣ ಸಂಸ್ಥೆಯನ್ನು ನಡೆಸಲು ನೋಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ.) ಈ ಕಛೇರಿಯಿಂದ ದಿನಾಂಕ: 31-03-2017ರಂದು ತಿರಸ್ಕರಿಸಲಾಗಿತ್ತು. ಅದರಂತೆ ಮೇಲ್ಮನವಿ ಸಲ್ಲಿಸಿದ ಪ್ರಯುಕ್ತ ಮಾನ್ಯ ಅಪರ ಆಯುಕ್ತರು, ಸಾ.ಶಿ.ಇ ಕಲಬುರಗಿ ಇವರು ಮೇಲ್ಮನವಿ ಪ್ರಾಧಿಕಾರ ಆದೇಶ ಸಂಖ್ಯೆ:ಸಿ3(3)ಖಾಪ್ರಾಶಾ/ಮೇಲ್ಮನವಿ/15/2017-18 ರ ಪ್ರಕಾರ 6ನೇ ತರಗತಿಯನ್ನು ಆಂಗ್ಲ ಮಾಧ್ಯಮದಲ್ಲಿ ಪ್ರಾರಂಭಿಸಲು ಮುಕ್ತ ನ್ಯಾಯಾಲಯದಲ್ಲಿ ದಿನಾಂಕ: 05.07.2017ರಂದು ಆದೇಶಿಸಿದ ಹಿನ್ನೆಲೆಯಲ್ಲಿ ಅನುಮತಿ ನೀಡಲಾಗಿದೆ.

| | | |
|---|---|---|
| 1. ಕ್ರಮ ಸಂಖ್ಯೆ | : | 32/2017-18 |
| 2. ಶಾಲೆಯ ಹೆಸರು | : | ಸರ್ವೋದಯ ಪಬ್ಲಿಕ್ ಹಿರಿಯ ಪ್ರಾಥಮಿಕ ಶಾಲೆ ಮಾನವಿ |
| 3. ಅನುಮತಿ ನೀಡಿದ ತರಗತಿ | : | 6ನೇ, 7ನೇ, 8ನೇ ತರಗತಿ |
| 4. ಪ್ರಾರಂಭಿಸಬೇಕಾದ ಶೈಕ್ಷಣಿಕ ವರ್ಷ | : | 2017-18, 2018-19, 2019-20, |
| 5. ಅನುಮತಿ ನೀಡಿದ ಮಾಧ್ಯಮ | : | ಆಂಗ್ಲ ಮಾಧ್ಯಮ |

ಸದರಿ ಶಿಕ್ಷಣ ಸಂಸ್ಥೆಯನ್ನು ಕ್ರಮ ಸಂಖ್ಯೆ 32/2017-18ಪುಟ ಸಂಖ್ಯೆ ..........ಸಂಪುಟ: 01 ರಲ್ಲಿ ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೋಂದಾಯಿಸಲಾಗಿದೆ. ಈ ಪ್ರಮಾಣ ಪತ್ರವನ್ನು **ಸರಕಾರಿ ಆದೇಶ ಸಂಖ್ಯೆ: ಇಡಿ 549 ಪಿಜಿಸಿ 2015 ದಿನಾಂಕ: 02-11-2015ರ ಪ್ರಕಾರ** ಈ ಕೆಳಕಂಡ ಷರತ್ತಿಗೊಳಪಟ್ಟು ಅನುಮತಿ ನೀಡಲಾಗಿದೆ.

1. ಈ ನೋಂದಾವಣೆಯು ನಿಯಮ 2(5) (8) ಕ್ಕೆ ಒಳಪಟ್ಟಿದೆ.
2. ಶಾಲಾ ನಿವೇಶನ, ವಿಸ್ತೀರ್ಣ, ಕಟ್ಟಡ, ಪಾಠ, ಪೀಠೋಪಕರಣಗಳು, ಸಿಬ್ಬಂದಿವರ್ಗ ಕಡ್ಡಾಯವಾಗಿ ಪಾಲಿಸಬೇಕು.
3. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೇ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
4. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
5. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿ ನಡೆಸತಕ್ಕದ್ದು. ಮತ್ತು ಯಾವುದೇ ಕಾರಣಕ್ಕೂ ಸರ್ಕಾರದ ಪೂರ್ವಾನುಮತಿ ಇಲ್ಲದೇ ಹಸ್ತಾಂತರಿಸತಕ್ಕದ್ದಲ್ಲ.
6. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗೆ ಹೊರಡಿಸಿರುವ ಎಲ್ಲಾ ಸರಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ 1983 (ಕರ್ನಾಟಕ ಆಕ್ಟ್ ಸಂಖ್ಯೆ: 1 ಆಫ್ 95 ) ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಅದರಡಿಯಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು. ಈ ಪ್ರಾಥಮಿಕ ಶಾಲಾ ನೋಂದಣಿಯಂತೆ ಸರ್ಕಾರಿ ಅಧಿಸೂಚನೆ ಸಂಖ್ಯೆ: ಇಡಿ 549 ಪಿಜಿಸಿ 2015 ದಿನಾಂಕ: 02-11-2015ರ ಪ್ರಕಾರ ಶಾಶ್ವತ ಅನುದಾನರಹಿತವಾಗಿರುತ್ತದೆ. ಆಡಳಿತ ಮಂಡಳಿಯು ಸರ್ಕಾರದಿಂದ ಯಾವುದೇ ಅನುದಾನವನ್ನು ಬಯಸುವುದಿಲ್ಲವೆಂದು ರೂ. 20.00 ಛಾಪಾ ಕಾಗದದಲ್ಲಿ ನೋಟರಿಯವರ ಮುಂದೆ ಪ್ರಮಾಣೀಕರಿಸಿದ ಒಪ್ಪಿಗೆ ಪತ್ರವನ್ನು ನೀಡುವುದು.
7. ಈಗ ಅನುಮತಿಸಿರುವಂತೆ 6 ರಿಂದ 8ನೇ ತರಗತಿಗೆ ಆಂಗ್ಲ ಮಾಧ್ಯಮದಲ್ಲೇ ನಡೆಸತಕ್ಕದ್ದು.
8. ಶಾಲೆಯು ಪ್ರಾರಂಭಿಸಿದ 2 ತಿಂಗಳ ಅವಧಿಯೊಳಗೆ ಪ್ರಥಮ ಮಾನ್ಯತೆಗೆ ಪ್ರಸ್ತಾವನೆಯನ್ನು ಸಲ್ಲಿಸಿ ಪ್ರಥಮ ಮಾನ್ಯತೆ ಪಡೆಯತಕ್ಕದ್ದು. ಪ್ರಥಮ ಮಾನ್ಯತೆ ಪಡೆದಲ್ಲಿ ಅಧಿಕೃತ ಶಾಲೆಯಾಗುತ್ತದೆ.

SECRETARY
Sri Sanjeevaraya Education Trust (R)
Manvi-584123 Dist · Raichur

PRINCIPAL
Sarvodaya Public School
MANVI-584123 Dt: Raichur

9. ಸರ್ಕಾರಿ ಶಿಕ್ಷಣ ಸಂಸ್ಥೆಗಳಿಗೆ ನಿಗಧಿಪಡಿಸಲಾದ ವಿದ್ಯಾರ್ಹತೆ ಅನುದಾನರಹಿತ ಖಾಸಗಿ ಶಿಕ್ಷಣ ಸಂಸ್ಥೆಗಳಿಗೂ ಅನ್ವಯವಾಗುತ್ತದೆ.
10. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳ (ಶಿಸ್ತು ಮತ್ತು ನಿಯಂತ್ರಣ) ನಿಯಮ 1999 ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು/ಅವುಗಳಿಗೆ ಬದ್ಧರಾಗಿರತಕ್ಕದ್ದು.
11. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಜಂಟಿ ಖಾತೆಯಲ್ಲಿ ಇಡತಕ್ಕದ್ದು.
12. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಾಗೂ ಆಡಳಿತ ಮಂಡಳಿಯ ಜಂಟಿ ಖಾತೆಯಲ್ಲಿ ಇರಿಸತಕ್ಕದ್ದು.
13. ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ನಿಯಮಾನುಸಾರವಾಗಿ ಪಾಲಿಸತಕ್ಕದ್ದು.
14. ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ರೋಸ್ಟರ ಪ್ರಕಾರ ನಿಯಮಿಸತಕ್ಕದ್ದು.
15. ಪ್ರತಿ ವರ್ಷವೂ ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.
16. ಕರ್ನಾಟಕ ಶಿಕ್ಷಣ ಮಸೂದೆ ನಿಯಮಗಳ ಪ್ರಕಾರ ಶಾಲೆಗೆ ಬೇಕಾದ ಪೀಠೋಪಕರಣಗಳು, ಪಾಠೋಪಕರಣ, ಗ್ರಂಥಾಲಯ ಪುಸ್ತಕಗಳು ಆಟದ ಮೈದಾನ ಶಾಲಾ ಕಟ್ಟಡ ಮುಂತಾದ ಸೌಲಭ್ಯಗಳನ್ನು ಒಂದು ವರ್ಷದಲ್ಲಿ ಒದಗಿಸಿಕೊಳ್ಳತಕ್ಕದ್ದು.
17. ಶಾಲಾ ಕೆಲಸದ ವೇಳೆ ಮತ್ತು ದಿನಾಂಕಗಳನ್ನು ಇಲಾಖೆಯ ನಿಯಮಗಳಂತೆ ಪಾಲಿಸತಕ್ಕದ್ದು.
18. ಗವರ್ನಿಂಗ್ ಕೌನ್ಸಿಲ್ ಇವರ ನಿಯಮ 4(4) ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
19. ವೃತ್ತಿ ತೆರಿಗೆಯನ್ನು ಕಡ್ಡಾಯವಾಗಿ ಪಾವತಿಸತಕ್ಕದ್ದು.
20. ಸರಕಾರಿ ಶಿಕ್ಷಣ ಸಂಸ್ಥೆಗಳಲ್ಲಿನ ಸಂಬಂದಿಸಿದ ಹುದ್ದೆಗೆ ನಿಗದಿಪಡಿಸಿದ ವೇತನ ಶ್ರೇಣಿಯ ಕನಿಷ್ಠ ವೇತನ (ಮೂಲ ವೇತನ) ಅನುದಾನ ರಹಿತ ಪ್ರಾಥಮಿಕ ಶಿಕ್ಷಣ ಸಂಸ್ಥೆಗಳಲ್ಲಿನ ನೌಕರರಿಗೂ ನೀಡತಕ್ಕದ್ದು. ಅದನ್ನು ಅಕೌಂಟ್ ಪೇಯಿ ಚೆಕ್ ಮೂಲಕ ಪಾವತಿ ಮಾಡತಕ್ಕದ್ದು.
21. ಮಕ್ಕಳ ಶಿಕ್ಷಣ ಹಕ್ಕು ಕಾಯ್ದೆ (ಆರ್.ಟಿ.ಇ) ನಿಯಮಗಳನ್ನು ಪಾಲಿಸತಕ್ಕದ್ದು.
22. ಸದರಿ ವಿಷಯದಲ್ಲಿ ಯಾವುದೇ ಶಾಲೆಯಿಂದ ಆಕ್ಷೇಪಣೆ ಬಂದರೆ ಹಾಗೂ ತಪ್ಪು ಮಾಹಿತಿ ಸಲ್ಲಿಸಿದ್ದು ಕಂಡುಬಂದಲ್ಲಿ ಯಾವುದೇ ಮುನ್ಸೂಚನೆ ಇಲ್ಲದೇ ಇಲಾಖೆ ಕೊಟ್ಟ ಅನುಮತಿಯನ್ನು ಹಿಂದಕ್ಕೆ ಪಡೆಯಲಾಗುವುದು.
23. ತಮ್ಮ ಶಾಲೆಯ ಡೈಸ್ ಸಂಖ್ಯೆಯನ್ನು ಎಸ್.ಎಸ್.ಎ ಪ್ರೋಗ್ರಾಮರ್ ಇವರಿಂದ ಪಡೆದುಕೊಳ್ಳತಕ್ಕದ್ದು.

ಉಪನಿರ್ದೇಶಕರು (ಆ)
ಸಾರ್ವಜನಿಕ ಶಿಕ್ಷಣ ಇಲಾಖೆ ರಾಯಚೂರು.

ಗೆ,

ಅಧ್ಯಕ್ಷರು/ಕಾರ್ಯದರ್ಶಿಗಳು **ಶ್ರೀ ಸಂಜೀವರಾಯ ಎಜ್ಯುಕೇಷನ್ ಟ್ರಸ್ಟ (ರಿ) ಮಾನವಿ** ಇವರಿಗೆ ರವಾನಿಸಿದೆ.

**ಪ್ರತಿಗಳು:**

1. ಮಾನ್ಯ ಅಪರಾಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಗುಲಬರ್ಗಾ ಇವರಿಗೆ ಸಲ್ಲಿಸಿದೆ.
2. ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್ ರಾಯಚೂರು ಇವರಿಗೆ ಸಲ್ಲಿಸಿದೆ.
3. ಕ್ಷೇತ್ರ ಶಿಕ್ಷಣಾಧಿಕಾರಿಗಳು **ಮಾನವಿ** ರವರಿಗೆ ಒದಗಿಸಿದೆ.

SECRETARY
Sri Sanjeevaraya Education Trust (R)
Manvi-584123 Dist · Raichur

PRINCIPAL
Sarvodaya Public School
MANVI-584123 Dt: Raichur

ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ

ಉಪನಿರ್ದೇಶಕರ ಕಛೇರಿ , ಸಾರ್ವಜನಿಕ ಶಿಕ್ಷಣ ಇಲಾಖೆ,RAICHUR ಜಿಲ್ಲೆ

# ಮಾನ್ಯತೆ ನವೀಕರಣ ಪ್ರಮಾಣ ಪತ್ರ

ಸಂಖ್ಯೆ : 55712 ದಿನಾಂಕ : 13-Dec-2023

**ವಿಷಯ** : ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ 2009 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ 1983 ಯೊಳಗೆ ರಚಿತವಾಗಿರುವ ನಿಯಮಗಳನ್ವಯ ಶಾಲಾ ಮಾನ್ಯತೆಯನ್ನು ನೀಡುವ ಬಗ್ಗೆ.

&&&&

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ SRI SANJEEVARAYA EDUCATIONAL TRUST R MAVNI ಆಡಳಿತ ಮಂಡಳಿಯು 29060619710 ಡೈಸ್ ಕೋಡ್ ಸಂಖ್ಯೆ SARVODAYA PUBLIC SCHOOL MANVI_Manvi ಶಾಲೆಗೆ [ವಿಳಾಸ], 1_10 ತರಗತಿವರೆಗೆ English ಮಾಧ್ಯಮಕ್ಕೆ ಶಾಲಾ ಮಾನ್ಯತೆಯನ್ನು ನವೀಕರಿಸಲು ಆನ್ಲೈನ್ನಲ್ಲಿ ಸಲ್ಲಿಸಿದ್ದ ಅರ್ಜಿಯಲ್ಲಿನ ದಾಖಲೆಗಳನ್ನು ಇಲಾಖೆಯ ಅಧಿಕಾರಿಗಳು ಪರಿಶೀಲಿಸಿ, ಈ ಕೆಳಕಂಡಂತೆ ಮಾನ್ಯತೆಯನ್ನು ನವೀಕರಿಸಿದೆ.

| ಕ್ರ.ಸಂ. | ವಿವರ | ಆನ್ಲೈನ್ ಅರ್ಜಿ ಸಂಖ್ಯೆ : 55712 |
|---|---|---|
| 1 | ಆಡಳಿತ ಮಂಡಳಿಯ ಹೆಸರು ಮತ್ತು ವಿಳಾಸ | SRI SANJEEVARAYA EDUCATIONAL TRUST R MAVNI |
| 2 | ಶಾಲೆಯ ಹೆಸರು ಮತ್ತು ವಿಳಾಸ | SARVODAYA PUBLIC SCHOOL MANVI_Manvi |
| 3 | ಡೈಸ್ ಕೋಡ್ ಸಂಖ್ಯೆ: | 29060619710 |
| 4 | ತರಗತಿ | 1 to 10 |
| 5 | ಮಾಧ್ಯಮ | English |
| 6 | ವಿಭಾಗ | 14 |
| 7 | ಶಾಲಾ ವಿಧ | Pvt. Unaided /Renewal Recognition |
| 8 | ಮಾನ್ಯತೆ ನವೀಕರಿಸಿರುವ ವರ್ಷ | 2023 2024 ಸಾಲಿನಿಂದ 2027 2028 ರವರೆಗೆ |

ಷರತ್ತುಗಳು:

1. ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ 2009, ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ 1983ರ ಅಡಿಯಲ್ಲಿ ಹಾಗೂ ಅದರ ಅಡಿಯಲ್ಲಿ ರಚಿತವಾದ ನಿಯಮಗಳ ಅನುಸಾರ ಶಾಲೆಯನ್ನು ನೋಂದಾಯಿಸಿ, ನೋಂದಾಯಿಸಿದ ತರಗತಿವರೆಗೆ ಮಾನ್ಯತೆಯನ್ನು ನವೀಕರಿಸಲಾಗಿದೆ. ಈ ತರಗತಿಗಳ ಹೊರತಾಗಿ ಹೆಚ್ಚುವರಿ ತರಗತಿಗಳನ್ನು ಮತ್ತು ಹೆಚ್ಚುವರಿ ವಿಭಾಗಗಳನ್ನು ನಡೆಸಲು ಅನುಮತಿ ಇರುವುದಿಲ್ಲ.

2. ಶಾಲೆಯು ಕರ್ನಾಟಕ ಶಿಕ್ಷಣ ಕಾಯ್ದೆ 1983 ಮತ್ತು ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ 2009 ಅದರಡಿಯಲ್ಲಿ ರಚಿತವಾದ ನಿಯಮಗಳ ಅಡಿಯಲ್ಲಿ ಕಾರ್ಯನಿರ್ವಹಿಸುವುದು.

SECRETARY
Sri Sanjeevaraya Education Trust (R)
Manvi-584123 Dist · Raichur

PRINCIPAL
Sarvodaya Public School
MANVI-584123 Dt: Raichur

PDF Scanner ACE Scanner

3. ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ 2009 ಅದರಡಿಯಲ್ಲಿ ರಚಿತವಾದ ನಿಯಮಗಳ ಅಡಿಯಲ್ಲಿ ಶೇಕಡಾ 25%ರಷ್ಟು ಸೀಟುಗಳನ್ನು ದುರ್ಬಲ ವರ್ಗದ ಮಕ್ಕಳಿಗೆ ಮೀಸಲಿಡುವುದು. ಆರ್.ಟಿ.ಇ ವ್ಯಾಪ್ತಿಗೆ ಒಳಪಡುವ ಶಾಲೆಗಳಿಗೆ ಸರ್ಕಾರವು ಮೀಸಲಿಟ್ಟ ಸೀಟುಗಳನ್ನು ಆರ್.ಟಿ.ಇ ಅಡಿಯಲ್ಲಿ ದಾಖಲಿಸಲು ಅಧಿಕಾರ ಹೊಂದಿರುತ್ತದೆ. [ಸರ್ಕಾರವು ಮಕ್ಕಳ ಪೋಷಕರು ವಾಸಿಸುವ ಅಕ್ಕ ಪಕ್ಕದ ಶಾಲೆಗಳಲ್ಲಿ ದಾಖಲಿಸಲು ಅನುಕೂಲವಾಗುವಂತೆ ನಿಯಮಗಳನ್ನು ರೂಪಿಸಿದ್ದು, ಅದರಂತೆ ಸರ್ಕಾರಿ, ಸರ್ಕಾರದಿಂದ ಅನುದಾನ ಪಡೆದ ಶಿಕ್ಷಣ ಸಂಸ್ಥೆಗಳು ಇದ್ದಲ್ಲಿ ಆ ಶಾಲೆಗೆ ಮಕ್ಕಳನ್ನು ದಾಖಲಿಸಲಾಗುವುದು] ಇಲ್ಲದಿದ್ದ ಪಕ್ಷದಲ್ಲಿ ಖಾಸಗಿ ಶಾಲೆಗಳು ಸರ್ಕಾರದಿಂದ ದಾಖಲಿಸುವ ಮಕ್ಕಳನ್ನು ದಾಖಲಿಸಿಕೊಂಡು ಪ್ರಾಥಮಿಕ ಹಂತದವರೆಗೆ ವಿದ್ಯಾಭ್ಯಾಸ ಮುಂದುವರೆಸಲು ಅವಕಾಶ ನೀಡುವುದು. ಈ ಮಕ್ಕಳನ್ನು ಯಾವುದೇ ತಾರತಮ್ಯವಿಲ್ಲದೆ ವ್ಯಾಸಂಗ ಮುಂದುವರೆಸಲು ಅವಕಾಶ ಕಲ್ಪಿಸುವುದು.

4. ಕಂಡಿಕೆ:3ರಲ್ಲಿ ವಿವರಿಸಿರುವಂತೆ ಆರ್.ಟಿ.ಇ ನಿಯಮದಡಿ ದಾಖಲಾದ ಮಕ್ಕಳ ಶುಲ್ಕಗಳನ್ನು ನಿಯಮಾನುಸಾರ ಸರ್ಕಾರವು ಬಿಡುಗಡೆ ಮಾಡುತ್ತದೆ. ಆದ್ದರಿಂದ ಈ ಮಕ್ಕಳಿಂದ ಯಾವುದೇ ಶುಲ್ಕವನ್ನು ವಸೂಲು ಮಾಡುವುದನ್ನು ನಿರ್ಬಂದಿಸಿದೆ.

5. ಶಾಲೆ ಮತ್ತು ಶಾಲೆಯ ಆಡಳಿತ ಮಂಡಳಿಯು ಯಾವುದೇ ತರವಾದ ಕ್ಯಾಪಿಟೇಷನ್ ಶುಲ್ಕವನ್ನು ಮತ್ತು ಸ್ವ‌ಇಚ್ಛೆಯಿಂದ ನೀಡುವ ಡೊನೇಷನ್ಗಳನ್ನು ಪೋಷಕರಿಂದ ದಾಖಲಾತಿ ಸಮಯದಲ್ಲಾಗಲೀ ಅಥವಾ ನಂತರದಲ್ಲಾಗಲೀ ಯಾವುದೇ ರೀತಿಯಾಗಿ ವಸೂಲು ಮಾಡುವುದನ್ನು ನಿರ್ಬಂದಿಸಿದೆ.

6. ಶಾಲೆಯು / ಆಡಳಿತ ಮಂಡಳಿಯು ತಮ್ಮ ಶಾಲೆಯಲ್ಲಿ ಮಕ್ಕಳ ಪೋಷಕರಿಂದ ವ್ಯಾಸಂಗ ಶುಲ್ಕವಾಗಿ ವಸೂಲು ಮಾಡುವ ಶುಲ್ಕದ ಮಾಹಿತಿಯನ್ನು ರಾಜ್ಯ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ:31:ಪಿಜಿಸಿ:2019, ದಿನಾಂಕ:27.07.2019ರನ್ವಯ ಮಾಹಿತಿಗಾಳನ್ನು ಇಲಾಖಾ ವೆಬ್ಸೈಟ್ನಲ್ಲಿ ಹಾಗೂ ಶಾಲಾ ಸೂಚನಾ ಫಲಕದಲ್ಲಿ ಪ್ರಕಟಿಸುವುದು. ನಿಗದಿತ ಶುಲ್ಕಕ್ಕಿಂತ ಹೆಚ್ಚುವರಿ ಶುಲ್ಕವನ್ನು ವಸೂಲು ಮಾಡತಕ್ಕದ್ದಲ್ಲ.

7. ಶಾಲೆಯು / ಆಡಳಿತ ಮಂಡಳಿಯು ವಿದ್ಯಾರ್ಥಿಗಳನ್ನು ಸರ್ಕಾರವು ನಿಗದಿಪಡಿಸಿದೆ ಅವಧಿಯಲ್ಲಿಯೇ ದಾಖಲಾತಿ ಮಾಡಿಕೊಳ್ಳುವುದು.

8. ಶಾಲೆಯು / ಆಡಳಿತ ಮಂಡಳಿಯು ಈ ಕೆಳಕಂಡ ಅಂಶಗಳ ವಿರುದ್ಧ ದಾಖಲಾತಿಯನ್ನು ನಿರಾಕರಿಸುವಂತಿಲ್ಲ.

(i) ವಯಸ್ಸಿನ ಪುರಾವೆ ಕೊರತೆಯಿಂದಾಗಿ.

(ii) ಜಾತಿ, ಧರ್ಮ, ಹುಟ್ಟಿದ ಸ್ಥಳ, ಭಾಷೆಯ ಆಧಾರದ ಮೇಲೆ.

(iii) ಪ್ರವೇಶದ ವಿಸ್ತೃತ ಅವಧಿಯ ನಂತರ ಪ್ರವೇಶವನ್ನು ಕೋರಿದರೆ.

9. ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು, ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ಪ್ರಕಾರ ಎಲ್ಲಾ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವುದು. [ಸಂಬಂಧಿಸಿದ ಪ್ರಾಧಿಕಾರಗಳಿಂದ ಅಗ್ನಿ ಸುರಕ್ಷತ ಮತ್ತು ಕಟ್ಟಡ ಸುರಕ್ಷತಾ ಪ್ರಮಾಣ ಪತ್ರ ಹಾಗೂ K.S.C.P.C.R ಮತ್ತು N.C.P.C.R ಪ್ರಕಾರ ಮಕ್ಕಳ ಕಲಿಕೆಯ ಸುರಕ್ಷತೆ]

10. ಶಾಲೆಯು / ಆಡಳಿತ ಮಂಡಳಿಯು ಈ ಕೆಳಕಂಡಂತೆ

(i) ಪ್ರವೇಶ ಪಡೆದ ಯಾವುದೇ ಮಗುವನ್ನು ಶಾಲೆಯಲ್ಲಿ ಪ್ರಾಥಮಿಕ ಶಿಕ್ಷಣ ಮತ್ತು ಮಾಧ್ಯಮ ಶಿಕ್ಷಣವನ್ನು ಪೂರ್ಣಗೊಳಿಸುವವರೆಗೆ ಯಾವುದೇ ತರಗತಿಯಲ್ಲಿ ಹಿಡಿದಿಟ್ಟುಕೊಳ್ಳಬಾರದು ಅಥವಾ ಶಾಲೆಯಿಂದ ಹೊರಹಾಕಬಾರದು.

(ii) ಯಾವುದೇ ಮಗುವನ್ನು ದೈಹಿಕ ಅಥವಾ ಮಾನಸಿಕವಾಗಿ ಕಿರುಕುಳಕ್ಕೆ ಒಳಪಡಿಸಬಾರದು.

(iii) ಪ್ರಾಥಮಿಕ ಶಿಕ್ಷಣ ಪೂರ್ಣಗೊಳ್ಳುವವರೆಗೆ ಯಾವುದೇ ಮಗು ಯಾವುದೇ ಬೋರ್ಡ್ ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ಅಗತ್ಯವಿಲ್ಲ.

(iv) ಪ್ರಾಥಮಿಕ ಶಿಕ್ಷಣವನ್ನು ಪೂರ್ಣಗೊಳಿಸುವ ಪ್ರತಿ ಮಗುವಿಗೆ ಆರ್.ಟಿ.ಇ ನಿಯಮ 21 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳಡಿಯಲ್ಲಿ ನಿಗದಿಪಡಿಸಿದಂತೆ ಪ್ರಮಾಣ ಪತ್ರವನ್ನು ನೀಡಲಾಗುತ್ತದೆ.

(v) ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು ಹಾಗೂ ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ನಿಬಂಧನೆಗಳ ಪ್ರಕಾರ ಶಾಲೆಯು ವಿಶೇಷ ಅಗತ್ಯತೆಗಳು / ವಿಶೇಷ ಮಕ್ಕಳನ್ನು ಹೊಂದಿರುವ ಮಕ್ಕಳನ್ನು ಸಹ ಸೇರಿಸಿಕೊಳ್ಳಬೇಕು.

(vi) ನೇಮಕಗೊಂಡ ಶಿಕ್ಷಕರು ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು ಹಾಗೂ ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ಹಾಗೂ ಸರ್ಕಾರಿ ಆದೇಶಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಿಗೆ ನಿಗದಿಪಡಿಸಿದಂತೆ ಕನಿಷ್ಠ ವಿದ್ಯಾರ್ಹತೆಗಳನ್ನು ಹೊಂದಿರತಕ್ಕದ್ದು.

(vii) ಶಿಕ್ಷಕರಿಗೆ ಪಾವತಿಸಬೇಕಾದ ವೇತನ ಮತ್ತು ಭತ್ಯೆಗಳು ಹಾಗೂ ಸೇವಾ ನಿಯಮಗಳು ಮತ್ತು ಷರತ್ತುಗಳು ರಾಜ್ಯ ಸರ್ಕಾರವು ಸೂಚಿಸಿದಂತೆ ಇರುತ್ತದೆ. ಮತ್ತು ಸರ್ಕಾರಿ ಅಧಿಸೂಚನೆ [ಭವಿಷ್ಯ ನಿಧಿ (Pಈ)] ಮತ್ತು ಪಾವತಿಸಬೇಕಾದ ಬ್ಯಾಂಕ್ ಮತ್ತು ಇತರೆ ವೇತನಗಳ ಮೂಲಕ ಶಿಕ್ಷಕರಿಗೆ ವೇತನವನ್ನು ಪಾವತಿಸಲಾಗುತ್ತದೆ. ಮತ್ತು ಉದ್ಯೋಗಿ ರಾಜ್ಯ ವಿಮೆಗೆ (ಇSI) ಒಳಪಡಿಸುತ್ತದೆ.

(viii) ಶಿಕ್ಷಕರು ಕಾಯ್ದೆ ಸೆಕ್ಷನ್ 24[1] ಮತ್ತು ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು ಹಾಗೂ ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ನಿಯಮ 17ರ ಅಡಿಯಲ್ಲಿ ಸೂಚಿಸಲಾದ ಕರ್ತವ್ಯಗಳನ್ನು ನಿರ್ವಹಿಸುತ್ತಾರೆ ಮತ್ತು ಮೇಲ್ವಿಚಾರಣೆ ಪರಿಗಣನೆಗಳಿಗಾಗಿ ಖಾಸಗಿ ಟ್ಯೂಷನ್ಗಳಲ್ಲಿ ತಮ್ಮನ್ನು ತೊಡಗಿಸಿಕೊಳ್ಳುವುದಿಲ್ಲ.

SECRETARY
Sri Sanjeevaraya Education Trust (R)
Manvi-584123 Dist · Raichur

PRINCIPAL
Sarvodaya Public School
MANVI-584123 Dt: Raichur

ACE Scanner

11. ಶಾಲೆಯು ಸಂಯೋಜಿತವಾಗಿರುವ ಶೈಕ್ಷಣಿಕ ರಾಜ್ಯ ಪಠ್ಯಕ್ರಮ ಮತ್ತು ರಾಜ್ಯ ಪಠ್ಯ ಪುಸ್ತಕಗಳನ್ನು ಅನುಸರಿಸುವುದು.

12. ಕರ್ನಾಟಕ ಶಿಕ್ಷಣ ಕಾಯ್ದೆ ಸೆಕ್ಷನ್ 19ರಲ್ಲಿ ನಿರ್ದಿಷ್ಟಪಡಿಸಿದಂತೆ ಶಾಲೆಯು ನಿಯಮಗಳು ಮತ್ತು ಮಾನದಂಡಗಳನ್ನು ನಿರ್ವಹಿಸುವುದು. ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳಲ್ಲಿ ಸೂಚಿಸಿರುವಂತೆ ಇಲಾಖಾ ಸಿಬ್ಬಂದಿಗಳನ್ನು ನೇಮಿಸುವುದು.

13. ಶಾಲೆಗೆ ಸಂಬಂಧಿಸಿದ ಶಾಲಾ ಕಟ್ಟಡಗಳು ಮತ್ತು ಇತರೆ ಮೂಲಭೂತ ಸೌಕರ್ಯಗಳನ್ನು ಹಗಲು ಅಥವಾ ರಾತ್ರಿಯಲ್ಲಿ ಯಾವುದೇ ವಾಣಿಜ್ಯ ಚಟುವಟಿಕೆಗಳಿಗೆ ಅಥವಾ ರಾಜಕೀಯ ಮತ್ತು ಶೈಕ್ಷಣಿಕೇತರ ಚಟುವಟಿಕೆಗಳಿಗೆ ನೀಡಬಾರದು.

14. ಶಾಲೆಯನ್ನು ಯಾವುದೇ ವ್ಯಕ್ತಿ ಅಥವಾ ಗುಂಪು ಅಥವಾ ಸಂಘದ ಲಾಭಕ್ಕಾಗಿ ನಡೆಸಬಾರದು.

15. ಶಾಲೆಯನ್ನು ಚಾರ್ಟೆಡ್ ಅಕೌಂಟೆಂಟ್ನಿಂದ ಆಡಿಟ್ ಮಾಡಿಸಿ, ಪ್ರತಿಯನ್ನು ಪ್ರತಿ ವರ್ಷ ಜೂನ್ ಅಂತ್ಯದೊಳಗೆ ಉಪನಿರ್ದೇಶಕರು / ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸಲ್ಲಿಸುವುದು.

16. ಸರ್ಕಾರಿ ಅಧಿಸೂಚನೆಯ [ಕನ್ನಡ ಭಾಷಾ ನೀತಿ 2016] ಪ್ರಕಾರ ಶಾಲೆಯು ಭಾಷಾ ನೀತಿಯನ್ನು ಅನುಸರಿಸುವುದು.

17. ಆರ್.ಟಿ.ಇ ಕಾಯ್ದೆ ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ಪ್ರಕಾರ ಆಡಳಿತ ಮಂಡಳಿ ಮತ್ತು ಶಿಕ್ಷಕರುಗಳು ಕಾರ್ಯನಿರ್ವಹಿಸುವುದು.

18. ಶಾಲೆ / ಆಡಳಿತ ಮಂಡಳಿಯು ಸರ್ಕಾರ ಮತ್ತು ಇಲಾಖೆಯ ನಿಯಮ ಮತ್ತು ನಿರ್ದೇಶನವನ್ನ ತಪ್ಪದೇ ಪಾಲಿಸುವುದು.

19. ಪ್ರತಿ ವರ್ಷದ ಮಾರ್ಚ್ ಅಂತ್ಯದ ಒಳಗಾಗಿ ಎಸ್.ಎ.ಟಿ.ಎಸ್ನಲ್ಲಿ ಶಾಲಾ ಮಾಹಿತಿಯನ್ನು ನಿಯಮನುಸಾರ ಅಪ್ಡೇಟ್ ಮಾಡುವುದನ್ನು ಕಡ್ಡಾಯಗೊಳಿಸಿದೆ.

20. ಮೇಲಿನ ಷರತ್ತುಗಳನ್ನು ಉಲ್ಲಂಘಿಸಿದ್ದಲ್ಲಿ ಆರ್.ಟಿ.ಇ ಕಾಯ್ದೆ 2009 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ 1983ರಡಿಯಲ್ಲಿ ರಚಿತವಾಗಿರುವ ನಿಯಮಗಳ ಅನುಸಾರ ಶಾಲೆಯ ಮಾನ್ಯತೆಯನ್ನು ರದ್ದುಪಡಿಸಲಾಗುವುದು.

21. ಶಾಲಾ ಮಾನ್ಯತೆ ಪ್ರಕ್ರಿಯೆ ಪೂರ್ಣಗೊಂಡ ನಂತರ ಆಡಳಿತ ಮಂಡಳಿಯು ಆನ್ ಲೈನ್ ನಲ್ಲಿ ಸಲ್ಲಿಸಿದ ಅರ್ಜಿಯಲ್ಲಿನ ಸಂಪೂರ್ಣ ದಾಖಲೆ/ ಮಾಹಿತಿಗಳನ್ನು ಇಲಾಖಾ ವೆಬ್ ಸೈಟ್ ನಲ್ಲಿ ಸಾರ್ವಜನಿಕವಾಗಿ ವೀಕ್ಷಿಸಲು ಅನುವುಮಾಡಿಕೊಡಲಾಗುವುದು.

22. ಮೇಲಿನ ಷರತ್ತುಗಳನ್ನು ಉಲ್ಲಂಘಿಸಿದ್ದಲ್ಲಿ ಆರ್.ಟಿ.ಇ ಕಾಯ್ದೆ 2009 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ 1983ರಡಿಯಲ್ಲಿ ರಚಿತವಾಗಿರುವ ನಿಯಮಗಳ ಅನುಸಾರ ಶಾಲೆಯ ಮಾನ್ಯತೆಯನ್ನು ರದ್ದುಪಡಿಸಲಾಗುವುದು.

ಉಪನಿರ್ದೇಶಕರು(ಆಡಳಿತ)
ಸಾರ್ವಜನಿಕ ಶಿಕ್ಷಣ ಇಲಾಖೆ
RAICHUR (2906) ಜಿಲ್ಲೆ

ಗೆ,

1. ಸಂಬಂಧಿಸಿದ ಆಡಳಿತ ಮಂಡಳಿ SRI SANJEEVARAYA EDUCATIONAL TRUST R MAVNI

2. ಮುಖ್ಯ ಶಿಕ್ಷಕರು, /Manvi/SARVODAYA PUBLIC SCHOOL MANVIಶಾಲೆ ಮತ್ತು ವಿಳಾಸ

3. ಕ್ಷೇತ್ರ ಶಿಕ್ಷಣಾಧಿಕಾರಿಗಳು ,MANVI (290606) ತಾಲ್ಲೂಕು/ವಲಯ RAICHUR (2906) ಜಿಲ್ಲೆ.

4. ಕಛೇರಿ ಪ್ರತಿ.

SECRETARY
Sri Sanjeevaraya Education Trust (R)
Manvi-584123 Dist : Raichur

PRINCIPAL
Sarvodaya Public School
MANVI-584123 Dt: Raichur